1615 (2097) ಶ್ರೀ ಪ್ರಭಾಕರ ಬಂಗೇರ ಕೆ. (ಬೆಳ್ತಂಗಡಿ) :– ಮಾನ್ಯ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳ್ತಂಗಡಿ ತಾಲ್ಲೂಕು ವ್ಯಾಪ್ತಿಯ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ 2007–08 ನೇ ಸಾಲಿನಿಂದ ಎಂಟನೇ ತರಗತಿಯನ್ನು ಪ್ರಾರಂಭಿಸಲು ಪ್ರಸ್ತಾವನೆಗಳು ಬಂದಿವೆಯೇ;

ಆ) ಗ್ರಾಮಾಂತರದ ವಿದ್ಯಾರ್ಥಿಗಳ ಶೈಕ್ಷಣಿಕ – ಅಭಿವೃದ್ಧಿಯನ್ನು ಗಮನ ದಲ್ಲಿಟ್ಟುಕೊಂಡು ಪ್ರಸ್ತಾವನೆಗಳನ್ನು 'ಅನುಮೋದಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಬಸವರಾಜ್ ಎಸ್. ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):

ಅ) 2007–08 ನೇ ವಾರ್ಷಿಕ ಕ್ರಿಯಾ ಯೋಜನೆಯಲ್ಲಿ ಬೆಳ್ತಂಗಡಿ ತಾಲ್ಲೂಕು ವ್ಯಾಪ್ತಿಯ ಹಿರಿಯ ಪ್ರಾಥಮಿಕ ಶಾಲೆಗಳಿಗೆ 8 ನೇ ತರಗತಿಯನ್ನು ಸೇರಿಸುವ ಯಾವುದೇ ಪ್ರಸ್ತಾವನೆ ಬಂದಿರುವುದಿಲ್ಲ.

ಆ) ಮೇಲಿನ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

1616 (2098) ಶ್ರೀ ಪ್ರಭಾಕರ ಬಂಗೇರ ಕೆ. (ಬೆಳ್ತಂಗಡಿ) :– ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಾಲೆಗಳಲ್ಲಿ ಮಕ್ಕಳ ಹಕ್ಕು ಸಂರಕ್ಷಣೆ ಕುರಿತಾಗಿ ಹಮ್ಮಿಕೊಂಡ ಕಾರ್ಯಕ್ರಮಗಳೇನು;

ಆ) ಜನಶಾಲಾ ಮತ್ತು ಮಕ್ಕಳ ಹಕ್ಕುಗಳ ಕೋಶದ ಕುರಿತಾದ ವಿವರಗಳೇನು; ಇವುಗಳ ಕಾರ್ಯ ವಿಧಾನ ಮತ್ತು ಸಾಧಿಸಿದ ಪ್ರಗತಿಯ ವಿವರಗಳೇನು;

ಇ) ಮಕ್ಕಳ ಹಕ್ಕುಗಳ ಕೋಶದ ಬಗ್ಗೆ ಅರಿವು ಮೂಡಿಸಲು ಮತ್ತು ಪ್ರಚಾರಕ್ಕೆ ಕೈಗೊಂಡ ಸಕಾಲಿಕ ಕ್ರಮಗಳೇನು;

ಈ) ಮಕ್ಕಳ ಹಕ್ಕುಗಳ ಕೋಶಕ್ಕಾಗಿ ನಿಗದಿಯಾದ ಹಣದ ಮೊತ್ತ ಎಷ್ಟು?

ಶ್ರೀ ಬಸವರಾಜ್ ಎಸ್. ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):

ಅ) ಪ್ರಸ್ತುತ ಮಕ್ಕಳ ಹಕ್ಕು ಸಂರಕ್ಷಣೆಯ ಬಗೆಗಿನ ಚಟುವಟಿಕೆಯನ್ನು ಪ್ರತ್ಯೇಕವಾಗಿ ಶಿಕ್ಷಣ ಇಲಾಖೆಯು ಹಮ್ಮಿಕೊಂಡಿರುವುದಿಲ್ಲ.

ಆ) ಜನಶಾಲಾ ಕಾರ್ಯಕ್ರಮವು 2004–05 ರಲ್ಲಿಯೇ ಕೊನೆಗೊಂಡಿದ್ದು, ಅಲ್ಲಿಂದ ಯಾವುದೇ ಕಾರ್ಯಕ್ರಮವನ್ನು ಹಮ್ಮಿಕೊಂಡಿಲ್ಲ.

ಇ) ಅನ್ವಯಿಸುವುದಿಲ್ಲ

ಈ) ಅನ್ವಯಿಸುವುದಿಲ್ಲ.

1617 (2099) ಶ್ರೀ ಪ್ರಭಾಕರ ಬಂಗೇರ ಕೆ. (ಬೆಳ್ತಂಗಡಿ) :– ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 2006–07 ನೇ ಸಾಲಿನಲ್ಲಿ ಮಂಜೂರಾದ ನೂತನ ಪ್ರೌಢಶಾಲೆಗಳಿಗೆ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ನೇಮಕ ಮತ್ತು ಮೂಲಭೂತ ಸೌಕರ್ಯಗಳನ್ನು ಒದಗಿಸುವ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು;

ಆ) ಬೆಳ್ತಂಗಡಿ ತಾಲ್ಲೂಕಿನ ಗ್ರಾಮಾಂತರ ಪ್ರದೇಶಗಳಲ್ಲಿ ಪ್ರಾರಂಭಿಸಲಾದ ನೂತನ ಪ್ರೌಢಶಾಲೆಗಳಿಗೆ ಸಕಾಲದಲ್ಲಿ ಮೂಲಭೂತ ಸೌಲಭ್ಯಗಳನ್ನು ಒದಗಿಸಿಕೊಡುವಲ್ಲಿ ಸರ್ಕಾರ ಸಕಾಲಿಕ ಕ್ರಮಗಳನ್ನು ಕೈಗೊಳ್ಳುವುದೇ?

ಶ್ರೀ ಬಸವರಾಜ್ ಎಸ್. ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):

ಅ) 2006–07 ನೇ ಸಾಲಿನಲ್ಲಿ 485 ಸರ್ಕಾರಿ ಪ್ರೌಢಶಾಲೆಗಳನ್ನು ಮಂಜೂರು ಮಾಡಲಾಗಿದ್ದು, ಪ್ರತಿ ಶಾಲೆಗೆ 01 ಮುಖ್ಯ ಶಿಕ್ಷಕರ, 01 ಕಲಾ ಮತ್ತು 01 ವಿಜ್ಞಾನ ಶಿಕ್ಷಕರ (ಪಿಸಿಎಂ) ಮತ್ತು 01 'ಡಿ' ದರ್ಜೆ ನೌಕರರ ಹುದ್ದೆಗಳನ್ನು ಮಂಜೂರು ಮಾಡಲಾಗಿದೆ. ಒಂದು ದ್ವೀತಿಯ ದರ್ಜೆ ಸಹಾಯಕರ ಹುದ್ದೆ ಮಂಜೂರು ಮಾಡುವ ಪ್ರಸ್ತಾವನೆ ಪರಿಶೀಲನೆಯಲ್ಲಿದ್ದು, ಬೋಧಕ ಹುದ್ದೆಗಳನ್ನು ತಾತ್ಕಾಲಿಕವಾಗಿ ನಿಯೋಜನೆ, ಬಡ್ತಿ, ಇತ್ಯಾದಿ ಮೂಲಕ ತುಂಬಲಾಗುತ್ತಿದೆ. ನೇರ ನೇಮಕಾತಿ ಪ್ರಕ್ರಿಯೆ ಜಾರಿಯಲ್ಲಿದೆ.